**Akashvani : Bangalore**
**Regional Bulletin In Kannada**
**26.05.2026 / 18.40 hrs**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

ಮುಖ್ಯಾಂಶಗಳು

೧. ಮೇಕೆದಾಟು ಯೋಜನೆಯ ಪರಿಷ್ಕೃತ ಡಿಪಿಆರ್ ಸಲ್ಲಿಕೆ ಪ್ರಕ್ರಿಯೆ ಪ್ರಗತಿಯಲ್ಲಿ -ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್

೨. ವರಿಷ್ಠರ ಸಭೆಯಲ್ಲಿ ನಾಯಕತ್ವದ ಬಗ್ಗೆ ಚರ್ಚೆ ನಡೆದಿಲ್ಲ- ದೆಹಲಿಯಲ್ಲಿ ಕಾಂಗ್ರೆಸ್ ನಾಯಕ ಕೆ.ಸಿ.ವೇಣುಗೋಪಾಲ್ ಸ್ಪಷ್ಟನೆ

೩. ರಾಜ್ಯಾದ್ಯಂತ ನೂತನ ೧೫೦ ನಾಡ ಕಚೇರಿಗಳ ನಿರ್ಮಾಣಕ್ಕೆ ಕಂದಾಯ ಇಲಾಖೆ ಅಂಕಿತ

೪. ರೈತರ ಆದಾಯ ಹೆಚ್ಚಿಸುವುದೇ ಸರ್ಕಾರದ ಗುರಿ- ಕೃಷಿ ಸಚಿವ ಎನ್.ಚಲುವರಾಸ್ವಾಮಿ.

೫. ಎರಡು ಸಾವಿರ ಹೆಕ್ಟೇರ್ ಪ್ರದೇಶದಲ್ಲಿ ಆನೆಧಾಮ ನಿರ್ಮಾಣಕ್ಕೆ ಶೀಘ್ರವೇ ಟೆಂಡರ್ ಪ್ರಕ್ರಿಯೆ-ಸಚಿವ ಈಶ್ವರ್ ಖಂಡ್ರೆ

---

ಮೇಕೆದಾಟು ಯೋಜನೆ ವಿಚಾರವಾಗಿ ತಮಿಳುನಾಡು ಸಲ್ಲಿಸಿದ್ದ ಪರಿಶೀಲನಾ ಅರ್ಜಿಯನ್ನು ಸುಪ್ರೀಂ ಕೋರ್ಟ್ ತ್ರಿಸದಸ್ಯ ಪೀಠ ವಜಾಗೊಳಿಸಿದೆ. ಈ ಕುರಿತಂತೆ ನವದೆಹಲಿಯಲ್ಲಿ ಪ್ರತಿಕ್ರಿಯಿಸಿದ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಇದು ಕರ್ನಾಟಕ ಪಾಲಿಗೆ ಶುಭಸುದ್ದಿಯಾಗಿದೆ ಎಂದು ತಿಳಿಸಿದ್ದಾರೆ. ರಾಜ್ಯದ ಜನರ ಪರವಾಗಿ ಸರ್ವೋಚ್ಚ ನ್ಯಾಯಾಲಯಕ್ಕೆ ಧನ್ಯವಾದ ಅರ್ಪಿಸುವುದಾಗಿ ಹೇಳಿದ್ದಾರೆ.

ಸುಪ್ರೀಂ ಕೋರ್ಟ್ ಈ ಹಿಂದಿನ ಆದೇಶದಲ್ಲೇ ಸ್ಪಷ್ಟ ಸೂಚನೆ ನೀಡಿದ್ದು ತಮಿಳುನಾಡು ಪಾಲಿನ ೧೭೭ ಟಿಎಂಸಿ ನೀರನ್ನು ಹರಿಸಬೇಕು ಎಂದು ಷರತ್ತು ವಿಧಿಸಿದೆ. ಸರ್ಕಾರ ಪರಿಷ್ಕೃತ ಡಿಪಿಆರ್ ಸಲ್ಲಿಕೆ ಪ್ರಕ್ರಿಯೆ ನಡೆಸುತ್ತಿದೆ ಎಂದು ತಿಳಿಸಿದ್ದಾರೆ.

ಇನ್ನೊಂದೆಡೆ ತಮಿಳುನಾಡು ಮುಖ್ಯಮಂತ್ರಿ ಸಿ.ಜೋಸೆಫ್ ವಿಜಯ್, ಪ್ರಧಾನಿ ನರೇಂದ್ರ ಮೋದಿ ಅವರಿಗೆ ಪತ್ರ ಬರೆದಿದ್ದು, ಕಾವೇರಿ ನದಿಗೆ ಅಡ್ಡಲಾಗಿ ನಿರ್ಮಿಸಲಿರುವ ಕರ್ನಾಟಕದ ಪ್ರಸ್ತಾವಿತ ಮೇಕೆದಾಟು ಜಲಾಶಯ ಯೋಜನೆಯನ್ನು ತಿರಸ್ಕರಿಸುವಂತೆ ಮನವಿ ಮಾಡಿದ್ದಾರೆ. ಇದು ಕಾವೇರಿ ನೀರಿನ ಮೇಲೆ ಅವಲಂಬಿತರಾಗಿರುವ ಲಕ್ಷಾಂತರ ರೈತರ ಹಿತಾಸಕ್ತಿಗಳಿಗೆ ದಕ್ಕೆ ತರಲಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ.

---

ರಾಜ್ಯದಲ್ಲಿನ ನಾಯಕತ್ವದ ಬಗ್ಗೆ ಯಾವುದೇ ಚರ್ಚೆ ನಡೆದಿಲ್ಲ ಎಂದು ಕಾಂಗ್ರೆಸ್ ಹಿರಿಯ ಮುಖಂಡ ಕೆ.ಸಿ.ವೇಣುಗೋಪಾಲ್ ಸ್ಪಷ್ಟಪಡಿಸಿದ್ದಾರೆ.

ನವದೆಹಲಿಯ ಇಂದಿರಾ ಭವನದಲ್ಲಿ ಇಂದು ನಡೆದ ವರಿಷ್ಠರ ಜೊತೆಗಿನ ಸಭೆಯ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ವರಿಷ್ಠರ ಸಭೆಯಲ್ಲಿ ವಿಧಾನಪರಿಷತ್ ಚುನಾವಣೆ, ರಾಜ್ಯಸಾಭಾ ಚುನಾವಣೆ ಬಗ್ಗೆ ಚರ್ಚಿಸಲಾಗಿದೆ ಎಂದು ತಿಳಿಸಿದ್ದಾರೆ.

ನಾಯಕತ್ವ ವಿಚಾರ ಕೇವಲ ಊಹಾಪೋಹ ಎಂದು ಹೇಳಿದ್ದಾರೆ.

---

ರಾಜ್ಯಾದ್ಯಂತ ೭೭೧ ಹೋಬಳಿ ಮಟ್ಟದ ನಾಡ ಕಛೇರಿಗಳು ಕಾರ್ಯನಿರ್ವಹಿಸುತ್ತಿದ್ದು, ಇಂತಹ ಜನ ಸಂಪರ್ಕವಿರುವ ಕಛೇರಿಗಳಿಗೆ ಅನೇಕ ಕಡೆಗಳಲ್ಲಿ ಸ್ವಂತ ಕಟ್ಟಡಗಳಿಗಳಿಲ್ಲ ಎಂದು ಕಂದಾಯ ಸಚಿವ ಕೃಷ್ಣಬೈರೇಗೌಡ ತಿಳಿಸಿದ್ದಾರೆ.

ಹಾಲಿ ಸ್ವಂತ ಕಟ್ಟಡಗಳು ಇಲ್ಲದೇ ಇರುವಂತಹ ಹಾಗೂ ಬಹಳ ಹಳೆಯ ಕಟ್ಟಡಗಳನ್ನು ಹೊಂದಿರುವ ನಾಡ ಕಛೇರಿಗಳನ್ನು ಗುರುತಿಸಿ ಮೊದಲ ಹಂತದಲ್ಲಿ ೯೪ ನಾಡ ಕಛೇರಿಗಳನ್ನು ನಿರ್ಮಿಸಲು ಮಂಜೂರಾತಿ ನೀಡಲಾಗಿದೆ. ಇನ್ನೂ ೫೬ ನಾಡ ಕಛೇರಿಗಳನ್ನು ನಿರ್ಮಿಸಲು ಇಂದು ನಡೆದ ಸಭೆಯಲ್ಲಿ ತೀರ್ಮಾನಿಸಲಾಗಿದೆ. ಈ ಮೂಲಕ ಒಟ್ಟು ೧೫೦ ನಾಡ ಕಛೇರಿಗಳಿಗೆ ಸುಸಜ್ಜಿತ ನೂತನ ಕಟ್ಟಡ ನಿರ್ಮಿಸಲು ನಿರ್ಧರಿಸಲಾಗಿದೆ ಎಂದು ಪತ್ರಿಕಾ ಪ್ರಕಟಣೆ ಮೂಲಕ ಸ್ಪಷ್ಟಪಡಿಸಿದ್ದಾರೆ.

ನಗರ ಪ್ರದೇಶಗಳಲ್ಲಿ ೭೫ ಲಕ್ಷ ರೂಪಾಯಿ ಮತ್ತು ಗ್ರಾಮೀಣ ಪ್ರದೇಶಗಳಲ್ಲಿ ೫೫ ಲಕ್ಷ ರೂಪಾಯಿ ವೆಚ್ಚದಲ್ಲಿ ನಾಡ ಕಛೇರಿಗಳನ್ನು ನಿರ್ಮಿಸಲು ಮಂಜೂರಾತಿ ನೀಡಲಾಗಿದೆ. ಇವುಗಳಿಂದ ಸಾರ್ವಜನಿಕರಿಗೆ ಉತ್ತಮ ಸೇವೆ ಹಾಗೂ ಸಿಬ್ಬಂದಿಗಳಿಗೆ ಸುಸಜ್ಜಿತ ಕಚೇರಿ ಒದಗಿಸುವ ಉದ್ದೇಶ ಈಡೇರಲಿದೆ ಎಂದು ಅವರು ಹೇಳಿದ್ದಾರೆ.

---

ಕೃಷಿ ಕ್ಷೇತ್ರ ಇಂದು ಹವಾಮಾನ ವೈಪರೀತ್ಯ, ಉತ್ಪಾದನಾ ವೆಚ್ಚದ ಏರಿಕೆ, ಮಾರುಕಟ್ಟೆ ಅಸ್ಥಿರತೆ ಮತ್ತು ಕಾರ್ಮಿಕ ಸಮಸ್ಯೆಗಳು ಸೇರಿದಂತೆ ಅನೇಕ ಸವಾಲುಗಳನ್ನು ಎದುರಿಸುತ್ತಿದೆ ಎಂದು ಕೃಷಿ ಸಚಿವ ಎನ್.ಚಲುವರಾಯಸ್ವಾಮಿ ಅಭಿಪ್ರಾಯಪಟ್ಟಿದ್ದಾರೆ. ಬೆಂಗಳೂರಿನ ಜಿಕೆವಿಕೆಯಲ್ಲಿ ನಡೆದ ಅಗ್ರಿ ಸ್ಟಾರ್ಟ್‌ಅಪ್ ಕ್ಲಾನ್‌ಕ್ಲೇವ್ ೨.೦ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಈ ಸವಾಲುಗಳಿಗೆ ಉತ್ತರ ಕೊಡುವ ಶಕ್ತಿ ಇಂದಿನ ತಂತ್ರಜ್ಞಾನ ಮತ್ತು ಕೃಷಿ ಸ್ಟಾರ್ಟ್‌ಅಪ್‌ಗಳಲ್ಲಿದೆ ಎಂದು ತಿಳಿಸಿದ್ದಾರೆ.

ಸರ್ಕಾರ ಕೃಷಿಯನ್ನು ಕೇವಲ ಬದುಕಿನ ಮಾರ್ಗವಾಗಿ ನೋಡದೇ, ಲಾಭದಾಯಕ ಉದ್ಯಮವನ್ನಾಗಿ ರೂಪಿಸುವ ಗುರಿಯೊಂದಿಗೆ ಕಾರ್ಯನಿರ್ವಹಿಸುತ್ತಿದೆ ಎಂದು ಸ್ಪಷ್ಟಪಡಿಸಿದ್ದಾರೆ. ಡಿಜಿಟಲ್ ಕೃಷಿ, ಡ್ರೋನ್ ತಂತ್ರಜ್ಞಾನ, ಡೇಟಾ ಆಧಾರಿತ ಬೆಳೆ ನಿರ್ವಹಣೆ, ಮೌಲ್ಯವರ್ಧನೆ ಮತ್ತು ನೇರ ಮಾರುಕಟ್ಟೆ ವ್ಯವಸ್ಥೆಗಳಿಗೆ ಸರ್ಕಾರ ಹೆಚ್ಚಿನ ಪ್ರೋತ್ಸಾಹ ನೀಡುತ್ತಿದೆ ಎಂದು ಹೇಳಿದ್ದಾರೆ. ಇದೇ ವೇಳೆ ಕೃಷಿ ನವೋದ್ಯಮಗಳು ಜಿಕೆವಿಕೆ ಆವರಣದಲ್ಲಿ ಇಟ್ಟಿದ್ದ ಸ್ಟಾಲ್‌ಗಳಿಗೆ ಭೇಟಿ ನೀಡಿದ ಸಚಿವರು ಮಾಹಿತಿ ಪಡೆದುಕೊಂಡರು.

---

ಮಾನವ-ಆನೆ ಸಂಘರ್ಷ ತಗ್ಗಿಸಲು ೨ ಸಾವಿರ ಹೆಕ್ಟೆರ್ ಪ್ರದೇಶದಲ್ಲಿ ಆನೆಧಾಮ ನಿರ್ಮಿಸಲು ಸರ್ಕಾರ ಯೋಜನೆ ರೂಪಿಸಿದ್ದು, ೮ ರಿಂದ ೧೦ ದಿನಗಳಲ್ಲಿ ಟೆಂಡರ್ ಪ್ರಕ್ರಿಯೆ ಆರಂಭಿಸಲು ಸೂಚಿಸಲಾಗಿದೆ ಎಂದು ಅರಣ್ಯ ಸಚಿವ ಈಶ್ವರ ಬಿ ಖಂಡ್ರೆ ತಿಳಿಸಿದ್ದಾರೆ.

ಹಾಸನದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಹಾಸನ, ಕೊಡಗು, ಚಿಕ್ಕಮಗಳೂರು ಜಿಲ್ಲೆಗಳಲ್ಲಿ ನೂರಾರು ಆನೆಗಳು ಕಾಡಿನ ಹೊರಗೇ ಇದ್ದು, ಆನೆಗಳಿಂದ ಬೆಳೆ ಮತ್ತು ಜೀವಹಾನಿ ಆಗದಂತೆ ತಡೆಯಲು ಆನೆಧಾಮ ನಿರ್ಮಿಸಲಾಗುತ್ತಿದೆ ಎಂದು ಹೇಳಿದ್ದಾರೆ.

ರಾಜ್ಯದಲ್ಲಿ ರಾಷ್ಟ್ರೀಯ ಮತ್ತು ಅಂತಾರಾಷ್ಟ್ರೀಯ ಮಟ್ಟದ ಮೈಸೂರು ಮತ್ತು ಬನ್ನೇರುಘಟ್ಟ ಮೃಗಾಲಯವಿದ್ದು, ಇದರ ಜೊತೆಗೆ ಹಲವು ಪ್ರಾಣಿ ಸಂಗ್ರಹಾಲಯಗಳು ಕಾರ್ಯ ನಿರ್ವಹಿಸುತ್ತಿವೆ. ಹೀಗಾಗಿ ಹೊಸ ಮೃಗಾಲಯ ಸ್ಥಾಪನೆ ಪ್ರಸ್ತಾಪ ಸರ್ಕಾರದ ಮುಂದಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.

---

ಪಡಿತರ ವಿತರಣೆಯಲ್ಲಿ ಕೇಂದ್ರ ಸರ್ಕಾರದ ಯೋಜನೆಯಡಿ ಪ್ರತಿ ಫಲಾನುಭವಿಗೆ ತಲಾ ೫ ಕೆ.ಜಿ. ಅಕ್ಕಿ ನೀಡಲಾಗುತ್ತಿದ್ದು. ಇದರ ಜೊತೆಗೆ ರಾಜ್ಯ ಸರ್ಕಾರವು ಹೆಚ್ಚುವರಿಯಾಗಿ ರಾಗಿ ಮತ್ತು ಅಕ್ಕಿ ವಿತರಿಸುತ್ತಿದೆ ಎಂದು ಆಹಾರ ಮತ್ತು ನಾಗರಿಕ ವ್ಯವಹಾರಗಳ ಸಚಿವ ಕೆ.ಎಚ್. ಮುನಿಯಪ್ಪ ತಿಳಿಸಿದ್ದಾರೆ.

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೇವನಹಳ್ಳಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ಪ್ರಕ್ರಿಯೆಯಲ್ಲಿ ಗುಣಮಟ್ಟವನ್ನು ಕಾಪಾಡಿಕೊಳ್ಳಲು ರಾಗಿಯನ್ನು ಸ್ವಚ್ಛಗೊಳಿಸಿ, ಬ್ಯಾಗಿಂಗ್ ಮಾಡಿ ವಿತರಿಸುವಲ್ಲಿ ವಿಳಂಬವಾಗಿದೆ. ಬಾಕಿ ಇರುವ ಪಡಿತರವನ್ನು ಆಯಾ ತಿಂಗಳುಗಳಿಗೆ ಸೇರಿಸಿ ಸಂಪೂರ್ಣವಾಗಿ ವಿತರಿಸಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ.

ಪ್ರಸ್ತುತ ೬ ಕೆ.ಜಿ ರಾಗಿ ಮತ್ತು ೪ ಕೆ.ಜಿ ಅಕ್ಕಿ ವಿತರಿಸುವ ಪ್ರಕ್ರಿಯೆ ನಡೆಯುತ್ತಿದೆ ಎಂದು ಹೇಳಿದ್ದಾರೆ.

---

ಬೆಂಗಳೂರಿನ ಅರಮನೆ ಮೈದಾನದಲ್ಲಿ ಇದೇ ೨೯ ರಿಂದ ೩೧ ರವರೆಗೆ ಮೂರನೇ ಆವೃತ್ತಿಯ ಎಫ್‌ಕೆಸಿಸಿಐ ಗ್ಲೋಬಲ್ ಎಮ್‌ಎಸ್‌ಎಮ್‌ಇ ಕಾನ್‌ಕ್ಲೇವ್-೨೦೨೬ ನಡೆಯಲಿದೆ.

ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ ಸಹಯೋಗದೊಂದಿಗೆ ಕೇಂದ್ರ ಸರ್ಕಾರದ ಸಣ್ಣ ಮತ್ತು ಮಧ್ಯಮ ಕೈಗಾರಿಕಾ ಸಚಿವಾಲಯ ರಾಜ್ಯ ಸರ್ಕಾರದ ಸಣ್ಣ ಕೈಗಾರಿಕಾ ಇಲಾಖೆಯ ಬೆಂಬಲದೊಂದಿಗೆ ಸಮ್ಮೇಳನ ಆಯೋಜಿಸಲಾಗಿದ್ದು, ಪ್ರಮುಖವಾಗಿ ಎಂಜಿನಿಯರಿಂಗ್ ಕ್ಷೇತ್ರದ ತಯಾರಿಕೆ ಮತ್ತು ಸೇವೆಗಳನ್ನು ಕೇಂದ್ರೀಕರಿಸಲಾಗಿದೆ.

ಎಫ್‌ಕೆಸಿಸಿಐ ಅಧ್ಯಕ್ಷೆ ಉಮಾರೆಡ್ಡಿ ಮಾತನಾಡಿ, ಸಣ್ಣ ಕೈಗಾರಿಕಾ ವಲಯವು ಪರಸ್ಪರ ಸಂಪರ್ಕ ಸಾಧಿಸಲು ಹಾಗೂ ಸಹಕಾರ ಬೆಳೆಸಿಕೊಳ್ಳಲು ಹೊಸ ಅವಕಾಶಗಳನ್ನು ಅನ್ವೇಷಿಸಲು ಈ ಸಮ್ಮೇಳನ ಸಹಕಾರಿಯಾಗಲಿದೆ ಎಂದು ತಿಳಿಸಿದ್ದಾರೆ.

---

ಪ್ರಧಾನಿ ನರೇಂದ್ರ ಮೋದಿ ಸರ್ಕಾರ ೧೨ ವರ್ಷಗಳನ್ನು ಪೂರೈಸಿದೆ. ಕೇಂದ್ರ ಸರ್ಕಾರದ ನೇರ ಹಣಕಾಸು ನೆರವು ಮತ್ತು ಆದಾಯ ಬೆಂಬಲದ ಕಿಸಾನ್ ಸಮ್ಮಾನ್ ನಿಧಿ ಬೆಳೆವಿಮೆ ಮತ್ತು ಅಪಾಯ ನಿರ್ವಹಣೆ, ಫಸಲ್ ಬೀಮಾ ಯೋಜನೆ ಸೇರಿದಂತೆ ಹಲವು ಯೋಜನೆಗಳನ್ನು ಬೆಳಗಾವಿಯಲ್ಲಿ ಯಶಸ್ವಿಯಾಗಿ ಅನುಷ್ಠಾನಗೊಳಿಸಲಾಗಿದೆ ಎಂದು ಬೆಳಗಾವಿಯ ಕೃಷಿ ಇಲಾಖೆಯ ಜಂಟಿ ನಿರ್ದೇಶಕರ ಎಚ್.ಡಿ.ಕೋಳೆಕರ ತಿಳಿಸಿದ್ದಾರೆ. ಕೃಷಿ ಉತ್ಪನ್ನಗಳ ವೃದ್ಧಿಯಿಂದ ರೈತರ ಆರ್ಥಿಕ ಸಬಲತೆ ಹೆಚ್ಚಿ, ರೈತರ ಕಲ್ಯಾಣಕ್ಕೆ ಕಾರಣವಾಗಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ.

---

ಹೈಕೋರ್ಟ್ ಪೀಠದ ಸ್ಥಾಪನೆ ರಾಜಕೀಯ ಬೇಡಿಕೆಯಲ್ಲ, ಅದು ನಮ್ಮ ಹಕ್ಕು ಎಂದು ಸಂಸದ ಬಿ.ವೈ. ರಾಘವೇಂದ್ರ ತಿಳಿಸಿದ್ದಾರೆ. ಶಿವಮೊಗ್ಗದಲ್ಲಿ ಹೈಕೋರ್ಟ್ ಪೀಠ ಸ್ಥಾಪನೆಗೆ ಒತ್ತಾಯಿಸಿ ಕಳೆದ ಹಲವು ದಿನಗಳಿಂದ ಶಿವಮೊಗ್ಗ ವಕೀಲರ ಸಂಘದ ಆಶ್ರಯದಲ್ಲಿ ನಡೆಯುತ್ತಿರುವ ಹೋರಾಟದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಭೌಗೋಳಿಕ ಸವಾಲುಗಳನ್ನು ಕಡೆಗಣಿಸಿ ಮಂಗಳೂರು ಪೀಠಕ್ಕೆ ಶಿವಮೊಗ್ಗ ಸೇರಿಸುವ ಪ್ರಸ್ತಾವನೆಗೆ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಮಲೆನಾಡು ಮತ್ತು ಮಧ್ಯ ಕರ್ನಾಟಕದ ಲಕ್ಷಾಂತರ ಜನರ ನ್ಯಾಯ ಪ್ರಾಪ್ತಿಯ ಹಕ್ಕಿಗಾಗಿ ಪಕ್ಷಾತೀತವಾಗಿ ಒಗ್ಗೂಡಲು ಕರೆ ನೀಡಿದ್ದಾರೆ.

__________ ಮುಕ್ತಾಯ __________